# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಹಾಸನ

## ಅಧಿಸೂಚನೆ ಸಂಖ್ಯೆ: ಆಡಳಿತ/ 01/2026, ದಿನಾಂಕ: 18.08.2026

ವಿಷಯ: **ಸೇವಕರ** ಹುದ್ದೆಗಳಿಗೆ ನೇಮಕಾತಿ ಮಾಡುವ ಬಗ್ಗೆ.

ಉಲ್ಲೇಖ:
1. ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯದ ಪತ್ರ ಸಂಖ್ಯೆ: ಡಿಜಿಎ-II (ಎಲ್.ಸಿ.ಎ-II)-128/2012, ದಿನಾಂಕ: 11.09.2023. **(04 ಹುದ್ದೆಗಳು)**
2. ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯದ ಪತ್ರ ಸಂಖ್ಯೆ: ಡಿಜಿಎ/712/2025, ದಿನಾಂಕ: 09.02.2026. **(44 ಹುದ್ದೆಗಳು)**
3. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 01 ಸೆಹಿಮ 2026, ದಿನಾಂಕ 27.02.2026.
4. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 02 ಸೇಹಿಮ 2026, ದಿನಾಂಕ 13.05.2026.
5. ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳು) (ನೇಮಕಾತಿ) (ತಿದ್ದುಪಡಿ) ನಿಯಮಗಳು 2021 ದಿನಾಂಕ: 06.07.2021.

* * * * * * *

ಹಾಸನ ಜಿಲ್ಲಾ ನ್ಯಾಯಾಲಯ ಘಟಕದಲ್ಲಿ ಖಾಲಿ ಇರುವ **48** ಸೇವಕರ ಹುದ್ದೆಗಳಿಗೆ ಅರ್ಜಿಗಳನ್ನು ಸ್ವೀಕರಿಸುವುದಕ್ಕೆ ನಿಗದಿಪಡಿಸಿರುವ ಕೊನೆಯ ದಿನಾಂಕದವರೆಗೂ ಅರ್ಹತೆ ಹೊಂದಿರುವ ಅಭ್ಯರ್ಥಿಗಳು ಆನ್ ಲೈನ್ ಮೂಲಕ ಅರ್ಜಿಗಳನ್ನು ಹಾಸನ ಜಿಲ್ಲಾ ನ್ಯಾಯಾಲಯದ ವೆಬ್‌ಸೈಟ್ **https://hassan.dcourts.gov.in/judges/online-recruitment/** ಮೂಲಕ ಸಲ್ಲಿಸಬಹುದೆಂದು ಅಧಿಸೂಚಿಸಲಾಗಿದೆ.

## ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ: 17.09.2026

**ಈ ನೇಮಕಾತಿಯು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ ರಿಟ್ ಅರ್ಜಿ ಸಂಖ್ಯೆ: 200448/2025, 17968/2025 & 3145/2023ರ ಪ್ರಕಾರ ಅಂತಿಮ ನಿರ್ಧಾರಕ್ಕೆ ಒಳಪಟ್ಟಿರುತ್ತದೆ.**

## 1. ವಿಶೇಷ ಸೂಚನೆ:

ಅ) ಅರ್ಜಿಗಳನ್ನು ಕಡ್ಡಾಯವಾಗಿ ಹಾಸನ ಜಿಲ್ಲಾ ನ್ಯಾಯಾಲಯದ ವೆಬ್‌ಸೈಟ್ **https://hassan.dcourts.gov.in/Judges/online-recruitment/** ನಲ್ಲಿ ದಿನಾಂಕ: **19.08.2026** ರಿಂದ ದಿನಾಂಕ: **17.09.2026**ರ ರಾತ್ರಿ **11.59** ರವರೆಗೆ ಮಾತ್ರ ಸಲ್ಲಿಸತಕ್ಕದ್ದು.

ಆ) ಅಭ್ಯರ್ಥಿಗಳು ಅರ್ಜಿಯಲ್ಲಿ ಚಾಲ್ತಿಯಲ್ಲಿರುವ ತಮ್ಮ ದೂರವಾಣಿ ಸಂಖ್ಯೆ ಹಾಗೂ ಇ-ಮೇಲ್ ವಿಳಾಸವನ್ನು ಕಡ್ಡಾಯವಾಗಿ ನಮೂದಿಸಬೇಕು.

## ಜವಾನ: ಖಾಲಿ ಹುದ್ದೆಗಳ ಸಂಖ್ಯೆ- 48

**ವೇತನ ಶ್ರೇಣಿ:** 27,000-650-29,600-725-32,500-800-35,700-900-39,300-1000-43,300-1125-46,675 ಹಾಗೂ ಲಭ್ಯವಿರುವ ಇತರೆ ಭತ್ಯೆಗಳು.

## 2. ಹುದ್ದೆಗಳ ವರ್ಗೀಕರಣ:

| ಮೀಸಲಾತಿ | ಮೀಸಲು ರಹಿತ | ಮಹಿಳೆ | ಕ.ಮಾ.ಅ | ಗ್ರಾಮೀಣ | ಮಾಜಿ ಸೈನಿಕ | ಅಂ. ಅ * | ಯೋಜನ ನಿರಾಶ್ರಿತ | ಇತರೆ ** | ಒಟ್ಟು |
|---|---|---|---|---|---|---|---|---|---|
| ಸಾಮಾನ್ಯ | 3 | 8 | 2 | 6 | 2 | 1* | 1 | 1** | 24 |
| ಪರಿಶಿಷ್ಟ ಜಾತಿ (ಪ್ರವರ್ಗ-ಎ) | 1 | 1 | - | 1 | - | - | - | - | 03 |
| ಪರಿಶಿಷ್ಟ ಜಾತಿ (ಪ್ರವರ್ಗ-ಬಿ) | 1 | 1 | - | - | - | - | - | - | 02 |
| ಪರಿಶಿಷ್ಟ ಜಾತಿ (ಪ್ರವರ್ಗ-ಸಿ) | 1 | 1*** | - | - | - | - | - | - | 02 |
| ಪರಿಶಿಷ್ಟ ಪಂಗಡ | - | - | - | 1 | - | 1* | - | - | 02 |
| ಪ್ರವರ್ಗ-I | - | 1 | - | - | - | 1* | - | - | 02 |
| ಪ್ರವರ್ಗ-II ಎ | - | 3 | 1 | 2 | 1 | - | - | - | 07 |
| ಪ್ರವರ್ಗ-II ಬಿ | - | - | - | - | - | 1* | - | - | 01 |
| ಪ್ರವರ್ಗ-III ಎ | - | - | - | 1 | - | 1* | - | - | 02 |
| ಪ್ರವರ್ಗ-III ಬಿ | - | 1 | - | 1 | - | 1* | - | - | 03 |
| ಒಟ್ಟು | 06 | 16 | 3 | 12 | 3 | 6 | 1 | 1 | 48 |

1. * – ದೃಷ್ಟಿಮಾಂದ್ಯ ದೋಷಯುಳ್ಳ ಅಭ್ಯರ್ಥಿಗಳಿಗೆ
2. ** – ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 179 ಸೇನೆನಿ 2020, ದಿನಾಂಕ 14.07.2021 ರ ಪ್ರಕಾರ "ಇತರೆ" (ತೃತೀಯ ಲಿಂಗ) ವರ್ಗೀಕರಣವನ್ನು ಮಾಡಲಾಗಿದೆ.
3. – ಮೇಲಿನ ವರ್ಗೀಕರಣವನ್ನು ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 01 ಸೇಹಿಮ 2026, ದಿನಾಂಕ 27.02.2026 ಪ್ರಕಾರ ಮಾಡಲಾಗಿದೆ.
4. *** – ಪರಿಶಿಷ್ಟ ಜಾತಿ ಪ್ರವರ್ಗ–ಸಿ (ಮಹಿಳೆ) – ಒಂದು ಹುದ್ದೆಯನ್ನು ಪರಿಶಿಷ್ಟ ಜಾತಿಯ ಪ್ರವರ್ಗ–ಸಿ ಯಲ್ಲಿನ 59 ಅತ್ಯಂತ ಹಿಂದುಳಿದ ಜಾತಿಗಳಿಗೆ ಮೀಸಲಿರಿಸಲಾಗಿದೆ. ಒಂದು ವೇಳೆ ಈ 59 ಅತ್ಯಂತ ಹಿಂದುಳಿದ ಜಾತಿಗಳಿಗೆ ಸೇರಿದವರು ಲಭ್ಯವಾಗದಿದ್ದಲ್ಲಿ ಈ ಹುದ್ದೆಯನ್ನು ಪ್ರವರ್ಗ–ಸಿ ಯ ಇತರೆ ಜಾತಿಗಳ ಅರ್ಹ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

**ವರ್ಗೀಕರಣವನ್ನು ಈ ಕೆಳಕಂಡ ಸರ್ಕಾರಿ ಆದೇಶಗಳ ಪ್ರಕಾರ ಮಾಡಲಾಗಿದೆ:**

1. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 08 ಸೇಹಿಮ 95, ದಿನಾಂಕ: 20.06.1995.
2. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 08 ಸೇಹಿಮ 95, ದಿನಾಂಕ: 04.01.2008.
3. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 02 ಸೇಹಿಮ 2023, ದಿನಾಂಕ: 08.03.2023.
4. ಸರ್ಕಾರಿ ಆದೇಶ ಸಂಖ್ಯೆ: ಸಕಇ 515 ಪಕವಿ 2026, ಬೆಂಗಳೂರು, ದಿನಾಂಕ: 08.05.2026.
5. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 02 ಸೇಹಿಮ 2026, ಬೆಂಗಳೂರು, ದಿನಾಂಕ: 13.05.2026, ತಿದ್ದುಪಡಿ ಆದೇಶ ದಿನಾಂಕ: 18.05.2026 ಮತ್ತು ಸೇರ್ಪಡೆ ಆದೇಶ ದಿನಾಂಕ: 25.05.2026.

## 3. ವಿದ್ಯಾರ್ಹತೆ:

**a)** ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದ ಒಳಗಾಗಿ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯವರು ನಡೆಸುವ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ (10ನೇ ತರಗತಿ) ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.

**b)** ಕನ್ನಡ ಭಾಷೆಯನ್ನು ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು.

## 4. ಆಯ್ಕೆಯ ವಿಧಾನ:

**a)** ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮ ಹಾಗೂ ಕರ್ನಾಟಕ ಅಧೀನ ನ್ಯಾಯಾಲಯಗಳು (ಲಿಪಿಕ ಮತ್ತು ಇತರೆ ಹುದ್ದೆಗಳು) ನೇಮಕಾತಿ ನಿಯಮ 1982 ಮತ್ತು ತಿದ್ದುಪಡಿ ನಿಯಮಗಳು 2007 ಹಾಗೂ 2021ರ ಪ್ರಕಾರ ನೇಮಕಾತಿ ನಡೆಸಲಾಗುವುದು.

**b)** ಅಭ್ಯರ್ಥಿ ಹೊಂದಿರುವ ಪ್ರಾವೀಣ್ಯತೆ ಮತ್ತು ಅಭ್ಯರ್ಥಿಯ ಸಾಮಾನ್ಯ ಜ್ಞಾನದ ಬಗ್ಗೆ ಸಂದರ್ಶನ ನಡೆಸಲಾಗುವುದು.

**c)** ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಪಡೆದ ಗರಿಷ್ಟ ಅಂಕಗಳ ಆಧಾರದ ಮೇಲೆ ಒಂದು ಹುದ್ದೆಗೆ 10 ಅಭ್ಯರ್ಥಿಗಳಂತೆ (**1 : 10** ರ ಅನುಪಾತದಲ್ಲಿ) ಅಭ್ಯರ್ಥಿಗಳನ್ನು ಪ್ರಕಟಿಸಿರುವ ಹುದ್ದೆಗಳಿಗೆ ಅನುಗುಣವಾಗಿ ಸಂದರ್ಶನಕ್ಕೆ ಕರೆಯಲಾಗುವುದು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. ಸಂದರ್ಶನವು 10 ಅಂಕಗಳನ್ನು ಒಳಗೊಂಡಿರುತ್ತದೆ.

## 5. ವಯೋಮಿತಿ:

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು –

- ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು ಮತ್ತು ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಗರಿಷ್ಠ ವಯಸ್ಸನ್ನು ಮೀರಿರಕೂಡದು.
- ಗರಿಷ್ಠ ವಯೋಮಿತಿ

| | |
|---|---|
| ಸಾಮಾನ್ಯ ವರ್ಗ | 35 + 5* ವರ್ಷ ಮೀರಿರಬಾರದು |
| ಪ್ರವರ್ಗ – 2ಎ, 2ಬಿ, 3ಎ, 3ಬಿ, | 38 + 5* ವರ್ಷ ಮೀರಿರಬಾರದು |
| ಪ.ಜಾತಿ, ಪ.ಪಂಗಡ, ಪ್ರವರ್ಗ-1 | 40 + 5* ವರ್ಷ ಮೀರಿರಬಾರದು |

## 6. ವಯೋಮಿತಿ ಸಡಿಲಿಕೆ:

**a)** ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 262 ಸೇನೆನಿ 2025, ದಿನಾಂಕ: 29.01.2026 ರನ್ವಯ "ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಈ ಆದೇಶ ಹೊರಡಿಸಿದ ದಿನಾಂಕದ ನಂತರ ಮುಂದಿನ ದಿನಾಂಕ: 31.12.2027 ರವರೆಗೆ ನೇರ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಿ ಹೊರಡಿಸಿರುವ ಅಧಿಸೂಚನೆಗಳನ್ವಯ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಆಯಾಯ ನೇಮಕಾತಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯಲ್ಲಿ ಒಂದು ಬಾರಿ ಕ್ರಮವಾಗಿ (as a one time measure) 5 ವರ್ಷಗಳ ಸಡಿಲಿಕೆ ನೀಡಿ ಆದೇಶಿಸಲಾಗಿದೆ ಎಂದು ತಿಳಿಸಿರುತ್ತಾರೆ.

**b)** ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅವರು ಎಷ್ಟು ವರ್ಷಗಳ ಅವಧಿಗೆ ಹುದ್ದೆಯಲ್ಲಿ ಸೇವೆ ಸಲ್ಲಿಸಿರುವರೋ ಅಥವಾ

ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ, ಎರಡಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ಸಡಿಲಿಕೆಯನ್ನು ನೀಡಲಾಗುವುದು.

**c)** ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ, ಅವರು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವರೋ ಆ ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

**d)** ಅಭ್ಯರ್ಥಿಯು ಅಂಗವಿಕಲನಾಗಿದ್ದಲ್ಲಿ, ವಿಧವೆಯಾಗಿದ್ದಲ್ಲಿ ಮತ್ತು ಜೀತ ಕಾರ್ಮಿಕನಾಗಿದ್ದು ಸಂಬಂಧಿಸಿದ ಪ್ರಾಧಿಕಾರಗಳು ನೀಡುವ ಪ್ರಮಾಣ ಪತ್ರ ಹೊಂದಿದ್ದಲ್ಲಿ ವಯೋಮಿತಿಯಲ್ಲಿ ಗರಿಷ್ಠ 10 ವರ್ಷಗಳ ಸಡಿಲಿಕೆ ನೀಡಲಾಗುವುದು.

'ಜೀತ ಕಾರ್ಮಿಕ' ಎಂದರೆ Bonded Labour System (Abolition) Act 1976 (Central Act 19 of 1976) or Karnataka Bonded Labour System (Abolition) Ordinance 1975 ರ ಅಡಿಯಲ್ಲಿ ಮಾಡಲಾದ ನಿಯಮಗಳ ಮೇರೆಗೆ ಜೀತ ಕಾರ್ಮಿಕ ಪದ್ಧತಿಯಿಂದ ಮುಕ್ತನಾದ ವ್ಯಕ್ತಿ.

**e)** ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದ ಪಕ್ಷದಲ್ಲಿ ಗರಿಷ್ಠ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸೇವೆ ಸಲ್ಲಿಸಿದ್ದಾರೋ ಅಷ್ಟು ವರ್ಷಗಳ ಅಥವಾ 05 ವರ್ಷಗಳ ಅವಧಿ, ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

**f)** ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸ್‌ನಲ್ಲಿ ಪೂರ್ಣ ಕಾಲಿಕ ಪರೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕೆಡೆಟ್ ಪರೀಕ್ಷಕನಾಗಿ ಸೇವೆ ಸಲ್ಲಿಸಿದ್ದಷ್ಟು ವರ್ಷಗಳು.

**g)** ಅಭ್ಯರ್ಥಿಯು ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮ ಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅಂತಹ ಗ್ರಾಮ ಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದ ವರ್ಷಗಳು.

## 7. ಪರಿವೀಕ್ಷಣಾ ಅವಧಿಃ

ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977ರ ಪ್ರಕಾರ 02 (ಎರಡು) ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ಅವರ ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ಮತ್ತು ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು.

## 8. ಅರ್ಜಿ ಸಲ್ಲಿಸುವ ವಿಧಾನಃ

ನಿಗದಿತ ಅರ್ಜಿ ಶುಲ್ಕ, ಪಾವತಿಸಬೇಕಾದ ಶುಲ್ಕ ಹಾಗೂ ವಿಧಾನ

| | |
|---|---|
| ಸಾಮಾನ್ಯ ವರ್ಗ, ಪ್ರವರ್ಗ - 2ಎ, 2ಬಿ, 3ಎ, 3ಬಿ, ಮಾಜಿ ಸೈನಿಕ ಮತ್ತು ಇತರೆ ವರ್ಗಕ್ಕೆ ಸೇರಿದ ಅಭ್ಯರ್ಥಿಗಳು | ರೂ.200/- |
| ಪ.ಜಾತಿ, ಪ.ಪಂಗಡ, ಪ್ರವರ್ಗ-1 ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ | ಶುಲ್ಕದಿಂದ ವಿನಾಯಿತಿ ನೀಡಿದೆ. |

ನಿಗದಿತ ಶುಲ್ಕವನ್ನು ನ್ಯಾಯಾಲಯದ ವೆಬ್‌ಸೈಟ್ **https://hassan.dcourts.gov.in/judges/online-recruitment/** ರಲ್ಲಿ ನೀಡಲಾದ ಲಿಂಕ್ ಮುಖಾಂತರ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ State Bank Collect ಮೂಲಕ ನಿಗದಿತ ಶುಲ್ಕವನ್ನು Online Payment through SBI e pay modes / Net-Banking / Credit Card / Debit Card / UPI ID ಸೌಲಭ್ಯದ ಮೂಲಕ ಪಾವತಿಸತಕ್ಕದ್ದು.

ಇದನ್ನು ಹೊರತುಪಡಿಸಿ **ಯಾವುದೇ ಡಿಮ್ಯಾಂಡ್ ಡ್ರಾಫ್ಟ್ : ಪೋಸ್ಟಲ್ ಆರ್ಡರ್ : ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ.**

**ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.**

ಅಭ್ಯರ್ಥಿಗಳು ON-LINE ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು.

1. ಅಭ್ಯರ್ಥಿಯು ಭಾರತೀಯ ನಾಗರೀಕನಾಗಿರತಕ್ಕದ್ದು.
2. ಅಭ್ಯರ್ಥಿಗಳು ಅರ್ಜಿಯನ್ನು ON-LINE ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು. ಸರಿಯಾದ ಮಾಹಿತಿ ನೀಡದೇ ಇರುವ ಮತ್ತು ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
3. ಅಭ್ಯರ್ಥಿಗಳು ಮೊಬೈಲ್ ಸಂಖ್ಯೆಯನ್ನು ಹಾಗೂ ಇ-ಮೇಲ್ ಐ.ಡಿಯನ್ನು ಕಡ್ಡಾಯವಾಗಿ ನಮೂದಿಸುವುದು. ಒಂದು ವೇಳೆ SMS ಅಥವಾ ಇ-ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರವು ಹೊಣೆಯಾಗುವುದಿಲ್ಲ.

4. ಅರ್ಹ ಅಭ್ಯರ್ಥಿಗಳಿಗೆ SMS / E-Mail ಮುಖಾಂತರ ಮಾಹಿತಿ ನೀಡಲಾಗುವುದು. ಸಂದರ್ಶನಕ್ಕೆ / ಅರ್ಹತಾ ಪರೀಕ್ಷೆಗೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗುವುದು. ಸದರಿ ಪಟ್ಟಿಯ ಆಧಾರದ ಮೇಲೆ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ / ಅರ್ಹತಾ ಪರೀಕ್ಷೆಗೆ ಕರೆಯಲಾಗುವುದು.
5. ಅಭ್ಯರ್ಥಿಯು ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.
6. ಬಣ್ಣದ ಭಾವಚಿತ್ರವು ಇತ್ತೀಚಿನದ್ದಾಗಿದ್ದು ಅಳತೆಯಲ್ಲಿ 5 cm ಉದ್ದ X 3.6 cm ಅಗಲವುಳ್ಳದ್ದಾಗಿರಬೇಕು ಮತ್ತು 50 kb ಅಳತೆ ಮೀರಿರಬಾರದು ಹಾಗೂ ಅದು .jpg ನಮೂನೆಯಲ್ಲಿರಬೇಕು. ಭಾವಚಿತ್ರದ ಹಿಂಬದಿಯು ಬಿಳಿ ಬಣ್ಣದ್ದಾಗಿರಬೇಕು.
7. ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪಲೋಡ್ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು).
8. ಅಭ್ಯರ್ಥಿಯು ಕಪ್ಪು ಬಾಲ್‌ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ (2.5 cm ಉದ್ದ x 7.5 cm ಅಗಲವುಳ್ಳದ್ದಾಗಿರಬೇಕು ಮತ್ತು 25 kb ಅಳತೆ ಮೀರಿರಬಾರದು ಹಾಗೂ ಅದು .jpg ನಮೂನೆಯಲ್ಲಿರಬೇಕು) ಅಪ್‌ಲೋಡ್ ಮಾಡಬೇಕು.
9. ತದನಂತರ ಅಭ್ಯರ್ಥಿಯು ON-LINE ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಈ ಅಧಿಸೂಚನೆಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು. ತದನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ತುಂಬಿದ ಪ್ರತಿಯನ್ನು Download ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಕಾಯ್ದಿರಿಸಿಕೊಳ್ಳತಕ್ಕದ್ದು ಹಾಗೂ ಅರ್ಹತಾ ಪರೀಕ್ಷೆಯ / ಸಂದರ್ಶನದ ಸಮಯದಲ್ಲಿ ಹಾಜರುಪಡಿಸತಕ್ಕದ್ದು.
10. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂದಿರುಗಿಸಲಾಗುವುದಿಲ್ಲ.
11. ನ್ಯಾಯಾಲಯದ ಅಧಿಕೃತ ವೆಬ್‌ಸೈಟ್‌ನಲ್ಲಿ ಅರ್ಜಿಯನ್ನು ಆನ್‌ಲೈನ್ ಮೂಲಕ ನೋಂದಾಯಿಸಲು / ಸಲ್ಲಿಸಲು ದಿನಾಂಕಃ **17.09.2026**ರ ರಾತ್ರಿ **11.59** ರವರೆಗೆ ಅವಕಾಶವಿರುತ್ತದೆ.

## ಮತ್ತು

12. ಶುಲ್ಕವನ್ನು ಚಲನ್ ಮುಖಾಂತರ ಪಾವತಿಸಲು ದಿನಾಂಕಃ **19.09.2026** ಕಡೆಯ ದಿನಾಂಕವಾಗಿದ್ದು ಅದರೊಳಗೆ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಶಾಖೆಯ ವ್ಯವಹಾರದ ವೇಳೆಯಲ್ಲಿ ಪಾವತಿಸತಕ್ಕದ್ದು.
13. ಆನ್‌ಲೈನ್ ಹೊರತುಪಡಿಸಿ ಇತರೆ ಯಾವುದೇ ವಿಧಾನದಲ್ಲಿ ಕಳುಹಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
14. ಸೇವಾನಿರತ ಅಭ್ಯರ್ಥಿಗಳು ಸಂಬಂಧಪಟ್ಟ ಪ್ರಾಧಿಕಾರದಿಂದ **"ನಿರಾಕ್ಷೇಪಣಾ ಪ್ರಮಾಣಪತ್ರ"** ವನ್ನು ಸದರಿ ಹುದ್ದೆಗೆ ಆಯ್ಕೆಯಾದ ಪಕ್ಷದಲ್ಲಿ ಆಯ್ಕೆ ಪಟ್ಟಿ ಪ್ರಕಟವಾದ 30 ದಿನಗಳೊಳಗಾಗಿ ಪಡೆಯತಕ್ಕದ್ದು.

15. ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ನಮೂನೆ 'ಡಿ' ಯಲ್ಲಿ, ಪ್ರವರ್ಗ-1ರ ಅಭ್ಯರ್ಥಿಗಳು ನಮೂನೆ 'ಇ' ಯಲ್ಲಿ ಮತ್ತು 2ಎ, 2ಬಿ, 3ಎ ಮತ್ತು 3ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ 'ಎಫ್' ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣಪತ್ರಗಳನ್ನು ಹೊಂದಿರತಕ್ಕದ್ದು.
16. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರದ ಆದೇಶ ಸಂಖ್ಯೆ ಸಿಆಸುಇ /53/ಸನೆನಿ/2007, ದಿನಾಂಕ 04.01.2008ರ ಪ್ರಕಾರ ನಿಗದಿತ ನಮೂನೆ-2 ರಲ್ಲಿ ಅಧಿಕೃತ ಅಧಿಕಾರಿಗಳಿಂದ ಪಡೆದು ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿ ಸಲ್ಲಿಸಬೇಕು. ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.
17. ಗ್ರಾಮೀಣ ಮೀಸಲಾತಿಯನ್ನು ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ-2 ರ ಜೊತೆ ನಮೂನೆ-1 ರಲ್ಲೂ (Creamy Layer Certificate) ಸಲ್ಲಿಸತಕ್ಕದ್ದು.
18. ಸರ್ಕಾರಿ ಅಧಿಸೂಚನೆ ಸಂಖ್ಯೆ ಸಿಆಸುಇ 71 ಸೆನೆನಿ 2001 ದಿನಾಂಕ 24.10.2002 ರನ್ವಯ ಕನ್ನಡ ಮಾಧ್ಯಮ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು 01ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ, ಮೊಹರು ಮತ್ತು ಜಾರಿ ಮಾಡಿದ ನಿಗದಿತ ನಮೂನೆಯಲ್ಲಿ ಹೊಂದಿರತಕ್ಕದ್ದು.
19. ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿನಾಂಕ 19.11.2005ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ ಸಿಆಸುಇ/ 115/ಸೇನೆನಿ/2005 ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣಪತ್ರವನ್ನು ಪಡೆದಿರಬೇಕು.
20. ಯೋಜನಾ ನಿರಾಶ್ರಿತ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ /44/ಸೇನೆನಿ/2001ರ ದಿನಾಂಕ 27.07.2001 ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು.
21. ಮಾಜಿ ಸೈನಿಕ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯಾದ / ವಿಮುಕ್ತಿ ಹೊಂದಿದ ಬಗ್ಗೆಪ್ರಮಾಣ ಪತ್ರವನ್ನು ಸಲ್ಲಿಸುವುದು.
22. ವಿಧವೆಯವರು, ಜೀತ ಕಾರ್ಮಿಕರು ಮತ್ತು ವಯೋಮಿತಿ ರಿಯಾಯಿತಿಗೆ ಅರ್ಹರಾದ ಇನ್ನಿತರರು ವಯೋಮಿತಿ ರಿಯಾಯಿತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರವನ್ನು ಹೊಂದಿರತಕ್ಕದ್ದು.
23. ಇತರೆ ವರ್ಗೀಕರಣದ ಅಡಿಯಲ್ಲಿ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರವು ನೀಡಿರುವ ಪ್ರಮಾಣಪತ್ರವನ್ನು ಹೊಂದಿರತಕ್ಕದ್ದು (Sec 6 of The Transgender Persons (Protection of Rights) Act, 2019).

24. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಲ್ಲಿ, ಮಹಿಳಾ ಅಭ್ಯರ್ಥಿಗಳು, ಮಾಜಿ ಸೈನಿಕ ಅಭ್ಯರ್ಥಿಗಳು, ಅಂಗವಿಕಲ ಅಭ್ಯರ್ಥಿಗಳು, ಯೋಜನಾ ನಿರಾಶ್ರಿತ ಅಭ್ಯರ್ಥಿಗಳು, ಗ್ರಾಮೀಣ ಅಭ್ಯರ್ಥಿಗಳು, ಹಾಗೂ ಕನ್ನಡ ಮಾಧ್ಯಮ ಅಭ್ಯರ್ಥಿಗಳ ಮೀಸಲಾತಿಗಳಿಗೆ ಅರ್ಹ ಅಭ್ಯರ್ಥಿಗಳು, ಲಭ್ಯವಿರದೇ ಇದ್ದ ಪಕ್ಷದಲ್ಲಿ, ಆ ಹುದ್ದೆಗಳನ್ನು ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು. ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳೂ ಸಹ ಲಭ್ಯವಾಗದಿದ್ದಲ್ಲಿ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಮೀಸಲಾದ ಹುದ್ದೆಗಳನ್ನು ಹೊರತುಪಡಿಸಿ ಇನ್ನುಳಿದ ಹಿಂದುಳಿದ ವರ್ಗಗಳ ಹುದ್ದೆಗಳನ್ನು ಸಾಮಾನ್ಯ ವರ್ಗದ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

25. ಮೌಖಿಕ ಪರೀಕ್ಷೆಯ ಸಮಯದಲ್ಲಿ ದಾಖಲೆಗಳ ಪರಿಶೀಲನೆಗಾಗಿ ಕರೆಯಲ್ಪಡುವ ಅಭ್ಯರ್ಥಿಗಳು, ಶೈಕ್ಷಣಿಕ ವಿದ್ಯಾರ್ಹತೆ (ಜನ್ಮ ದಿನಾಂಕವನ್ನು ತೋರಿಸಲು ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ,), ಜಾತಿ ಪ್ರಮಾಣ ಪತ್ರ, ಗ್ರಾಮೀಣ / ಮಾಜಿ ಸೈನಿಕರು / ವಿಧವೆಯರು / ಅಂಗವಿಕಲ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಕ್ಲೇಮು ಮಾಡಿದ ಮೀಸಲಾತಿಗಳು ಇವುಗಳಿಗೆ ಸಂಬಂಧಿಸಿದಂತೆ ಅಗತ್ಯ ಮೂಲ ದಾಖಲೆಗಳನ್ನು ಪರಿಶೀಲನೆಗಾಗಿ ಸಲ್ಲಿಸತಕ್ಕದ್ದು. ಪರಿಶೀಲನೆ ಮಾಡುವಾಗ ಅರ್ಜಿದಾರರು ಅರ್ಜಿಯಲ್ಲಿ ಒದಗಿಸಿರುವ ಮಾಹಿತಿಯು ಸುಳ್ಳೆಂದು ಕಂಡುಬಂದಲ್ಲಿ, ಆಗ ಅವರ ಅಭ್ಯರ್ಥಿತನ ತಿರಸ್ಕೃತವಾಗುತ್ತದೆ ಹಾಗೂ ಅವರು ಸುಳ್ಳು ಮಾಹಿತಿ ನೀಡಿದ್ದಕ್ಕಾಗಿ ಕ್ರಿಮಿನಲ್ ಪ್ರಾಸಿಕ್ಯೂಷನ್ ಗೂ ಸಹಾ ಗುರಿಯಾಗಬೇಕಾಗುತ್ತದೆ.

26. ಅರ್ಹತಾ ಪರೀಕ್ಷೆಗೆ ಹಾಗೂ ಸಂದರ್ಶನಕ್ಕೆ ಆಯ್ಕೆಯಾಗುವ ಅಭ್ಯರ್ಥಿಗಳು ಹಾಸನದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು.

27. ನೇಮಕಾತಿ ಹೊಂದಿದ ಅಭ್ಯರ್ಥಿಗಳು ಹೊಸ ಪಿಂಚಣಿ ಯೋಜನೆಗೆ (NPS) ಅಥವಾ ಸರ್ಕಾರ ನಿಗದಿಪಡಿಸುವ ಯೋಜನೆಯ ವ್ಯಾಪ್ತಿಗೆ ಒಳಪಟ್ಟಿರುತ್ತಾರೆ.

28. ಅಧಿಸೂಚನೆ ಹೊರಡಿಸಿರುವ ಹುದ್ದೆಗಳು ಬದಲಾವಣೆಗೆ ಒಳಪಟ್ಟಿರುತ್ತವೆ.

29. ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು/ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು/ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡುಬಂದಲ್ಲಿ ಅವನು/ಅವಳು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತುಕ್ರಮಕ್ಕೆ ಒಳಪಡುವುದಲ್ಲದೇ ಹುದ್ದೆಯ ಸಂದರ್ಶನದಿಂದ/ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

18-8-26

(ಹೇಮಾವತಿ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ಹಾಸನ
ಹಾಸನ-573201
18/8/26

TO NO. 7058/2026



**ಅಧಿಸೂಚನೆಯ ನಕಲನ್ನು ಈ ಕೆಳಕಂಡವರ ಅವಗಾಹನೆಗಾಗಿ ಮುಖಪತ್ರದೊಂದಿಗೆ ಸಲ್ಲಿಸಲಾಗಿದೆಃ**

ಮಹಾವಿಲೇಖನಾಧಿಕಾರಿಗಳು
ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ,
ಬೆಂಗಳೂರು - 560 001.

**ಅಧಿಸೂಚನೆಯ ನಕಲನ್ನು ಈ ಕೆಳಕಂಡವರಿಗೆ ರವಾನಿಸಲಾಗಿದೆಃ**

1. ಪ್ರಧಾನ ನಗರ ವ್ಯವಹಾರ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ನಗರ ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬಾಗಲಕೋಟೆ, ಬೆಳಗಾವಿ, ಬಳ್ಳಾರಿ, ಬೀದರ್, ಚಾಮರಾಜನಗರ, ಚಿಕ್ಕಮಗಳೂರು, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಕ್ಷಿಣಕನ್ನಡ, ದಾವಣಗೆರೆ, ಧಾರವಾಡ, ಗದಗ, ಹಾವೇರಿ, ಕಲಬುರಗಿ, ಕಾರವಾರ, ಕೊಡಗು, ಕೋಲಾರ, ಕೊಪ್ಪಳ, ಮಂಡ್ಯ, ಮೈಸೂರು, ರಾಯಚೂರು, ರಾಮನಗರ, ತುಮಕೂರು, ಉಡುಪಿ, ವಿಜಯಪುರ, ಯಾದಗಿರಿ – ಇವರಿಗೆ, ನೇಮಕಾತಿ ಅಧಿಸೂಚನೆಯನ್ನು ತಮ್ಮ ನ್ಯಾಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿ.
2. ವಿಲೇಖನಾಧಿಕಾರಿಗಳು, ನಗರ ಸಿವಿಲ್ ನ್ಯಾಯಾಲಯ, ಬೆಂಗಳೂರು - ಇವರಿಗೆ, ನೇಮಕಾತಿ ಅಧಿಸೂಚನೆಯನ್ನು ತಮ್ಮ ನ್ಯಾಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿ.
3. ಪ್ರಧಾನ ನ್ಯಾಯಾಧೀಶರು, ಕೌಟುಂಬಿಕ ನ್ಯಾಯಾಲಯ, ಹಾಸನ.
4. ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು, ಹಾಸನ.
5. ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ, ಚನ್ನರಾಯಪಟ್ಟಣ.
6. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.ಗಳು, ಅರಸೀಕೆರೆ / ಅರಕಲಗೂಡು / ಬೇಲೂರು / ಹೊಳೆನರಸೀಪುರ / ಸಕಲೇಶಪುರ.
7. ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.ಗಳು, ಹಾಸನ / ಅರಸೀಕೆರೆ / ಅರಕಲಗೂಡು / ಬೇಲೂರು / ಚನ್ನರಾಯಪಟ್ಟಣ / ಹೊಳೆನರಸೀಪುರ / ಸಕಲೇಶಪುರ.
8. 1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.ಗಳು, ಹಾಸನ.
9. ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ, ಆಲೂರು.
10. ಸಂಕಲನಾಧಿಕಾರಿ, ಕರ್ನಾಟಕ ರಾಜ್ಯ ಪತ್ರ, ಸರ್ಕಾರಿ ಹೊರವಲಯ ಮುದ್ರಣಾಲಯ, ಮೈಸೂರು ರಸ್ತೆ, ಮೈಸೂರು - ಇವರಿಗೆ ಕರ್ನಾಟಕ ರಾಜ್ಯ ವಾರ್ತಾ ಪತ್ರದಲ್ಲಿ ಪ್ರಕಟಿಸುವ ಸಲುವಾಗಿ.
11. ಆಯುಕ್ತರು, ವಾರ್ತಾ ಇಲಾಖೆ, ನಂ.17, ಭಗವಾನ್ ಮಹಾವೀರ ಜೈನ್, (ಇನ್‌ಫೆಂಟ್ರಿ) ರಸ್ತೆ, ಬೆಂಗಳೂರು - 560 001 - ಇವರಿಗೆ ಪ್ರಾದೇಶಿಕ ದಿನಪತ್ರಿಕೆಗಳಲ್ಲಿ ವ್ಯಾಪಕ ಪ್ರಚಾರಕ್ಕಾಗಿ ಪ್ರಕಟಿಸಲು ಕೋರಿ.
12. ಉಪ ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ವಾರ್ತಾ ಭವನ, ಹಾಸನ.
13. ಸಾಫ್ಟ್‌ವೇರ್ ಟೆಕ್ನಿಷಿಯನ್, ಜಿಲ್ಲಾ ನ್ಯಾಯಾಲಯ, ಹಾಸನ ಇವರಿಗೆ ಅಂತರ್ಜಾಲದಲ್ಲಿ ಪ್ರಕಟಿಸಲು ಕೋರಿ.
14. ಕಛೇರಿಯ ಸೂಚನಾ ಫಲಕಕ್ಕೆ
15. ಕಛೇರಿ ನಕಲು.

18-8-2026

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಹಾಸನ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ಹಾಸನ-573201

18/8/26